# ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಆರನೇ ಅಧಿವೇಶನ)

## ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 13ನೇ ಫೆಬ್ರವರಿ, 2015

(ಸಮಯ: ಬೆಳಗ್ಗೆ 10.00 ಗಂಟೆಗೆ)

------

## 1. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2015ರ ಫೆಬ್ರವರಿ 02ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ 02ನೇ ಫೆಬ್ರವರಿ 2015ರಂದು ಶ್ರೀ ಬಸವರಾಜ ರಾಯರೆಡ್ಡಿಯವರು ಸೂಚಿಸಿದ ಪ್ರಸ್ತಾವದ ಮೇಲಿನ ಚರ್ಚೆಗೆ ಸರ್ಕಾರದ ಉತ್ತರ.

## 2. ಶಾಸನ ರಚನೆ

### I. <u>ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು</u>

**(i) ಬೆಂಗಳೂರು ನೀರು ಸರಬರಾಜು ಮತ್ತು ಗ್ರಾಮಸಾರ ಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕ, 2015**
**ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ) ಅವರು:-**

ಅ) 2015ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಗ್ರಾಮಸಾರ ಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**(ii) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2015**
**ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ) ಅವರು:-**

ಅ) 2015ನೇ ಸಾಲಿನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.,.

## II. ವಿಧೇಯಕವನ್ನು ಹಿಂದಕ್ಕೆ ಪಡೆಯುವುದು.

ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ(ತಿದ್ದುಪಡಿ) ವಿಧೇಯಕ, 2014

ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ,ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) ಅವರು:-

2014ನೇ ಸಾಲಿನ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ(ತಿದ್ದುಪಡಿ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು.

## 3.ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

ಆ) ದಿನಾಂಕ 10.02.2015ರ ಆರನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ನಾರಾಯಣಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 82(1832) : ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೇ ಪಟ್ಟಿ

## 4 .ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು:-

1. ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2013-2014ನೇ ಸಾಲಿನ ಲೆಕ್ಕಪತ್ರಗಳ (1 ಮತ್ತು 2) ಮತ್ತು ಧನ ವಿನಿಯೋಗ ಮೇಲಿನ ವರದಿಗಳನ್ನು ಮಂಡಿಸುವುದು.

ಪು.ತಿ.ನೋ.,.

2. ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ಮಾರ್ಚ್ 2014ಕ್ಕೆ ಕೊನೆಯಗೊಂಡ ವರ್ಷಕ್ಕೆ ನೀಡಿರುವ (ಅ) ಆರ್ಥಿಕ ವಲಯ (ವರದಿ ಸಂಖ್ಯೆ- 8) (ಆ) ರಾಜಸ್ವ ವಿಭಾಗ ಮೇಲಿನ ವರದಿ (ಸಂಖ್ಯೆ-7) (ಇ) ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ವರದಿ (ಸಂಖ್ಯೆ-9) ಯನ್ನು ಮಂಡಿಸುವುದು.

## 5. ವರದಿಗಳನ್ನೊಪ್ಪಿಸುವುದು

1. **ಶ್ರೀ ಎನ್.ಹೆಚ್.ಶಿವಶಂಕರರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು,** ಅರ್ಜಿಗಳ ಸಮಿತಿ) ಅವರು ಸಮಿತಿಯ 2014-15ನೇ ಸಾಲಿನ ಹದಿನೆಂಟನೇ ವರದಿಯನ್ನೊಪ್ಪಿಸುವುದು.

2. **ಶ್ರೀ ಬಿ.ಆರ್.ಯಾವಗಲ್** (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ) ಅವರು ಸರ್ಕಾರಿ ಭರವಸೆಗಳ ಸಮಿತಿಯ ಮೂರನೇ ವರದಿಯನ್ನೊಪ್ಪಿಸುವುದು.

## 6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಬಿ.ಎನ್.ವಿಜಯಕುಮಾರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಅಪ್ಪಚ್ಚು ರಂಜನ್, ಯು.ಬಿ.ಬಣಕಾರ್, ಸಿ.ಟಿ. ರವಿ ಹಾಗೂ ಇತರರು ರಾಜ್ಯದಲ್ಲಿ ಅಕ್ರಮವಾಗಿ ಮರಳು ಗಣಿಗಾರಿಕೆ ಅವ್ಯಾಹತವಾಗಿ ನಡೆಯುತ್ತಿರುವುದರಿಂದ ರಾಜ್ಯ ಸರ್ಕಾರಕ್ಕೆ ನಷ್ಟವುಂಟಾಗುತ್ತಿದ್ದು, ಸದರಿ ಅಕ್ರಮ ಗಣಿಗಾರಿಕೆಗೆ ಕಡಿವಾಣ ಹಾಕಲು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಆರ್.ಅಶೋಕ್,ಬಸವರಾಜ ಬೊಮ್ಮಾಯಿ, ಗೋವಿಂದ ಎಂ. ಕಾರಜೋಳ, ಕೆ.ಜಿ.ಬೋಪಯ್ಯ ಹಾಗೂ ಇತರರು ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಸರ್ಕಾರಿ ಜಮೀನುಗಳನ್ನು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಿರುವ ಸಣ್ಣ ರೈತರುಗಳನ್ನು ತೆರವುಗೊಳಿಸುತ್ತಿರುವುದರಿಂದ ಉಂಟಾಗಿರುವ ಆತಂಕದ ಪರಿಸ್ಥಿತಿಯ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

## 7. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕೆ.ಬಿ.ಕೋಳಿವಾಡ ಅವರು ರಾಜ್ಯದಲ್ಲಿರುವ ಗ್ರಾಮ ಪಂಚಾಯತ್‌ಗಳ ಗ್ರಂಥಾಲಯಗಳಲ್ಲಿ ಮೇಲ್ವಿಚಾರಕರುಗಳಾಗಿ ಕಾರ್ಯನಿರ್ವಹಿಸುತ್ತಿರುವವರ ಸೇವೆಯನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

**ಪು.ತಿ.ನೋ.,.**

2. ಶ್ರೀ ಹೆಚ್. ಡಿ.ರೇವಣ್ಣ ಅವರು ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕಿನ ಹಳೇಕೋಟೆ ಹೋಬಳಿ ವ್ಯಾಪ್ತಿಯಲ್ಲಿರುವ ಹಳ್ಳಿಗಳಿಗೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯನ್ನು ಕಾರ್ಯಗತಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

3. ಶ್ರೀ ಕೆ.ಜಿ.ಬೋಪಯ್ಯ ಅವರು ರಾಜ್ಯದಲ್ಲಿರುವ ಎಲ್ಲಾ ಗ್ರಾಹಕರ ನ್ಯಾಯಾಲಯಗಳಿಗೆ ಅಧ್ಯಕ್ಷರು ಮತ್ತು ಸದಸ್ಯರನ್ನು ನೇಮಿಸುವ ಬಗ್ಗೆ ಆಹಾರ ಮತ್ತು ನಾಗರೀಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಸಿ.ಟಿ. ರವಿ ಅವರು 2012ರಲ್ಲಿ ಚಿಕ್ಕಮಗಳೂರು ನಗರಕ್ಕೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಸ್ಥಾಪಿಸಲು ಮಂಜೂರಾತಿ ದೊರೆತಿದ್ದು, ನೋಡಲ್ ಅಧಿಕಾರಿಯನ್ನು ನೇಮಕಗೊಳಿಸಿ ಇದರ ನಿರ್ವಹಣೆಯನ್ನು ಮಾಡುತ್ತಿದ್ದರೂ ಸಹ ತರಗತಿಗಳು ಪ್ರಾರಂಭವಾಗದಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

5. ಶ್ರೀ ಬಿ.ಎನ್ ವಿಜಯಕುಮಾರ್ ಅವರು ಸರ್ಕಾರಿ ನೌಕರರಿಗೆ ಜಾರಿಗೊಳಿಸಲಾಗಿರುವ ಜ್ಯೋತಿ ಸಂಜೀವಿನಿ ಯೋಜನೆಯನ್ನು ನಿವೃತ್ತ ಸರ್ಕಾರಿ ನೌಕರರಿಗೆ ವಿಸ್ತರಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6. ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕು ಹಾನಬಾಳ್ ಗ್ರಾಮದಲ್ಲಿ ಕೈಗೊಂಡಿರುವ ಅಗನಿ ಕುಡಿಯುವ ನೀರು ಯೋಜನೆ ಕಾಮಗಾರಿಯು ಕಳಪೆಯಾಗಿರುವುದರಿಂದ ಈ ಬಗ್ಗೆ ತನಿಖೆ ನಡೆಸಿ, ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

7. ಶ್ರೀ ಕೆ.ಎಂ.ತಿಮ್ಮರಾಯಪ್ಪ ಅವರು ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಪಿಹೆಚ್‌ಡಿ ವ್ಯಾಸಂಗ ಮಾಡುತ್ತಿರುವ ಜಿ.ಆರ್.ಎಫ್/ಎಸ್.ಆರ್.ಎಫ್ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯ ವತಿಯಿಂದ ಯು.ಜಿ.ಸಿ ನೀಡುತ್ತಿರುವ ಸ್ಕಾಲರ್ ಶಿಪ್‌ಗಳು ಪೂರ್ಣವಾಗಿ ಬಿಡುಗಡೆಯಾಗಿಲ್ಲದಿರುವುದರಿಂದ ಬಡ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

8. ಶ್ರೀ ಎಲ್.ಎ. ರವಿಸುಬ್ರಹ್ಮಣ್ಯ ಅವರು ರಾಜ್ಯದಲ್ಲಿ ವ್ಯಾಪಕವಾಗಿ ಹರಡುತ್ತಿರುವ H1N1 ಪರೀಕ್ಷೆಯನ್ನು 2013-14ನೇ ಸಾಲಿನಲ್ಲಿ ಸರ್ಕಾರಿ ಆಸ್ಪತ್ರೆಗಳಿಂದ ಬಂದ Throat swab ಗಳಿಗೆ Nimhans ನಲ್ಲಿ ಉಚಿತ ಪರೀಕ್ಷೆ ಮಾಡಲಾಗುತ್ತಿತ್ತು. ಆದರೆ, ಅಕ್ಟೋಬರ್ 2014ರಿಂದ Throat swab ಪರೀಕ್ಷೆಗೆ Nimhans ನಲ್ಲಿ ರೂ 2,250/-ಗಳ ಶುಲ್ಕಗಳನ್ನು ಪಡೆಯಲಾಗುತ್ತಿರುವುದರಿಂದ, ಬಡ ರೋಗಿಗಳಿಗೆ ಹೊರೆಯಾಗುತ್ತಿರುವುದರಿಂದ ಸದರಿ ಪರೀಕ್ಷೆಯನ್ನು ಉಚಿತವಾಗಿ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

**ಮು.ತಿ.ನೋ.,.**

9.ಶ್ರೀ ಕೆ.ಬಿ. ಪ್ರಸನ್ನ ಕುಮಾರ್ ಅವರು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ "ಶಾಲಾಮಾತೆಯರಿಗೆ" ಕಳೆದ 4 ತಿಂಗಳಿಂದ ವೇತನ ನೀಡಿಲ್ಲದಿರುವುದರಿಂದ ಅವರುಗಳ ಜೀವನ ನಿರ್ವಹಣೆಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

10.ಶ್ರೀ ಆರ್.ಅಶೋಕ ಅವರು ಬೆಂಗಳೂರು ಉತ್ತರ ತಾಲ್ಲೂಕಿನ ಜಾರಕಬಂಡೆ ಕಾವಲ್ ಮತ್ತು ಸಿಂಗಾಪುರ ಗ್ರಾಮಗಳಲ್ಲಿ ಅರಣ್ಯ ಇಲಾಖೆಗೆ ಸೇರಿದ ಸುಮಾರು 357 ಎಕರೆ ಜಮೀನನ್ನು ಇಂಡಿಯನ್ ಏರ್ ಫೋರ್ಸ್ ನವರಿಗೆ ಮಾರಾಟ ಮಾಡಿದ್ದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11.ಶ್ರೀ ಮಧು ಎಸ್. ಬಂಗಾರಪ್ಪ ಅವರು ಶಿವಮೊಗ್ಗ ಜಿಲ್ಲೆ ಸಾಗರ ಮತ್ತು ಸೊರಬ ತಾಲ್ಲೂಕಿನ ವರದಾ, ದಂಡಾವತಿ ಮತ್ತು ಮಾವಿನಹೊಳೆ ಅಕ್ಕಪಕ್ಕದಲ್ಲಿರುವ ರೈತರ ಬೆಳೆಗಳು ನೆರೆಹಾವಳಿಗೆ ತುತ್ತಾಗುತ್ತಿರುವುದರಿಂದ, ಇದಕ್ಕೆ ಶಾಶ್ವತ ಪರಿಹಾರ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12. ಶ್ರೀ ಎನ್. ಚಲುವರಾಯಸ್ವಾಮಿ ಅವರು ಕರ್ನಾಟಕ ಪಂಚಾಯತ್ ಇಂಜಿನಿಯರಿಂಗ್ ಇಲಾಖೆಯ ಸಹಾಯಕ ಮತ್ತು ಕಿರಿಯ ಇಂಜಿನಿಯರ್‌ಗಳ ನೇಮಕಾತಿಗೆ ಹೊರಡಿಸಿರುವ ಅಧಿಸೂಚನೆಯಲ್ಲಿ ಬಿ.ಇ ಸಿವಿಲ್ ಮತ್ತು ಪರಿಸರ ಇಂಜಿನಿಯರಿಂಗ್ ಪದವಿಯ ಜೊತೆಗೆ ಪೂರ್ವ ಸೂಚನೆಯಿಲ್ಲದೆ ಕಂಪ್ಯೂಟರ್ ಕೋರ್ಸ್ ಕಡ್ಡಾಯ ಮಾಡಿರುವುದರಿಂದ ಅರ್ಹ ಅಭ್ಯರ್ಥಿಗಳಿಗೆ ಅನಾನುಕೂಲವಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

13.ಶ್ರೀ ಭೀಮಾ ನಾಯಕ್ ಎಸ್. ಅವರು ಬಳ್ಳಾರಿ ಜಿಲ್ಲೆ, ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ತುಂಗಾಭದ್ರಾ ನದಿಯಿಂದ 0.54ಟಿ.ಎಂ.ಸಿ. ನೀರನ್ನು ಮಾಲವಿ ಜಲಾಶಯಕ್ಕೆ ಒದಗಿಸುವ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

14.ಶ್ರೀ ವೈ.ಎನ್. ರುದ್ರೇಶಗೌಡ ಅವರು ಬೇಲೂರು ಕ್ಷೇತ್ರ ವ್ಯಾಪ್ತಿಯಲ್ಲಿ ಶಾಶ್ವತ ಬರಪೀಡಿತ ಪ್ರದೇಶಗಳಾಗಿರುವ ಹಳೇಬೀಡು ಮತ್ತು ಜಾವಗಲ್ ಹೋಬಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

**ಪು.ತಿ.ನೋ.,.**

15. ಡಾ॥ ವಿಶ್ವನಾಥ ಈ. ಪಾಟೀಲ್ ಅವರು 2014ರ ಮಾರ್ಚ ಅಂತ್ಯದವರೆಗೆ ತಾಳೆ ಬೆಳೆಗೆ ನಿಗದಿ ಮಾಡಿದ 8,500ರೂಗಳ ಬೆಂಬಲ ಬೆಲೆಯನ್ನು ಈ ವರ್ಷ 15,000 ರೂಗಳಿಗೆ ಹೆಚ್ಚಿಸುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

ಪಿ. ಓಂಪ್ರಕಾಶ
ಕಾರ್ಯದರ್ಶಿ

*Raj N*

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm